# Swachh bharat campaign
# 24-Jan-2019

### “ವಿದ್ಯಾವರ್ಧಕ ಕಾಲೇಜಿನಲ್ಲಿ ಸ್ವಚ್ಛತಾ ಸರ್ವೇಕ್ಷಣ ಅಭಿಯಾನದ ಜಾಗೃತಿ ಕಾರ್ಯಕ್ರಮ” – ನಂ. ೧ ಸ್ಥಾನ ಗಳಿಸಲು ಸಜ್ಜು – ಮೇಯರ್






ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ:೨೪.೦೧.೨೦೧೯ರ ಗುರುವಾರ ಬೆಳಗ್ಗೆ ೯.೩೦ಕ್ಕೆ ಮೈಸೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಶ್ರೀಮತಿ ಪುಷ್ಪಲತಾ ಜಗನ್ನಾಥ್‌ರವರ ನೇತೃತ್ವದಲ್ಲಿ ಕಾಲೇಜಿನ ವಿದ್ಯಾರ್ಥಿಗಳನ್ನು ಕುರಿತು ಸ್ವಚ್ಛ ಭಾರತ ಸರ್ವೇಕ್ಷಣ್ ೨೦೧೯ಅನ್ನು ಕುರಿತು ಮಾಹಿತಿ ನೀಡಲಾಯಿತು. ನಂತರ ಮಾತನಾಡಿದ ಪಾಲಿಕೆಯ ಆಯುಕ್ತರಾದ ಶ್ರೀ ಜಗದೀಶ್‌ರವರು ಮೈಸೂರು ನಗರವನ್ನು ಮತ್ತೊಮ್ಮೆ ನಂಬರ್ ಒನ್ ಸ್ವಚ್ಛ ನಗರವನ್ನಾಗಿಸಲು ಎಲ್ಲಾ ವಿದ್ಯಾರ್ಥಿಗಳು ಹಾಗೂ ನಗರ ವಾಸಿಗಳು ಕೈ ಜೋಡಿಸಬೇಕೆಂದು ಮನವಿ ಮಾಡಿದರು.

ಪಾಲಿಕೆಯ ಆರೋಗ್ಯಾಧಿಕಾರಿಗಳಾದ ಡಾ. ನಾಗರಾಜುರವರು ಮಾತನಾಡಿ ನಗರದಲ್ಲಿನ ಕಸ ವಿಲೇವಾರಿ ಪದ್ಧತಿ (ಹಸಿ–ಒಣ ವಿಂಗಡಣೆ)ಯ ಬಗ್ಗೆ ವಿಸ್ತೃತವಾದ ಮಾಹಿತಿಯನ್ನು ನೀಡಿದರು ಹಾಗೂ ಸ್ವಚ್ಛ ಸರ್ವೇಕ್ಷಣ್ ಅಭಿಯಾನದಲ್ಲಿ ಭಾಗವಹಿಸುವ ಪ್ರತಿಯೊಬ್ಬರು ತಮ್ಮ ಪ್ರತಿಕ್ರಿಯೆಯನ್ನು ಹೇಗೆ ನೀಡಬೇಕು ಎಂಬುದನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ವಿದ್ಯಾರ್ಥಿಗಳು ಈ ಅಭಿಯಾನದಲ್ಲಿ ಇ ರೀತಿಯಾಗಿ ತಮ್ಮ ಪ್ರತಿಕ್ರಿಯೆಯನ್ನು ಸಲ್ಲಿಸಬಹುದಾಗಿದೆ ಎಂದು ಪ್ರತಿಯೊಂದು ರೀತಿಯನ್ನು ಹಾಗೂ ಅಲ್ಲಿ ಕೇಳುವ ಪ್ರಶ್ನೆಗಳನ್ನು ಅದಕ್ಕೆ ವಾಸ್ತವದ ಉತ್ತರವನ್ನು ನೀಡಬೇಕೆಂದು ಸಲಹೆ ನೀಡಿದರು.

ವಿದ್ಯಾರ್ಥಿಗಳು ಈ ಅಭಿಯಾನದಲ್ಲಿ ತಾವು ಸಕ್ರಿಯವಾಗಿ ಪಾಲ್ಗೊಳ್ಳುವುದಲ್ಲದೇ ತಮ್ಮ ಪರಿಚಿತರಿಗೂ ಸಹ ಇದರ ಬಗ್ಗೆ ಜಾಗೃತಿ ಮೂಡಿಸಿ ಅವರೂ ಸಹ ಈ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಪ್ರೇರಿಪಿಸುತ್ತೇವೆ ಎಂದು ಮಹಾನಗರ ಪಾಲಿಕೆಯ ತಂಡಕ್ಕೆ ಭರವಸೆಯನ್ನು ನೀಡಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್.ಮರೀಗೌಡರವರು, ವಾರ್ಡ್ ನಂ.೨೪ ರ ಪಾಲಿಕೆ ಸದಸ್ಯರಾದ ಶ್ರೀ.ಸಿ.ರಮೇಶ್ ಅವರು, ಅಧ್ಯಾಪಕರು ಹಾಗೂ ಅಧ್ಯಾಪಕೇತರರು ಉಪಸ್ಥಿತರಿದ್ದರು.




















VIDYAVARDHAKA LAW COLLEGE




ರಂಗ ಮಂಟಪ













Vidyavardhaka First Grade College, Mysuru – Events, Special Talks, Seminars and Activities page















